# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(3)ಪಿಆರ್/13/2024-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 31.7.24

**ಕಛೇರಿ ಆದೇಶ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಫ್-'ಸಿ' ವೃಂದದ ಸಾಮಾನ್ಯ ವರ್ಗಾವಣೆ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ನಅಇ 63 ಎಂ.ಎನ್.ಯು 2023, ದಿ: 04-07-2024
2) ಸಂಖ್ಯೆ: ಬಿ12(5)ಪಿ.ಆರ್/112/24-25, ದಿನಾಂಕ: 20-07-2024ರ ಸುತ್ತೋಲೆ
3) ಮಾನ್ಯ ಮುಖ್ಯ ಆಯುಕ್ತರು ರವರು ಸಂಖ್ಯೆ:ಬಿ12(5)ಪಿ.ಆರ್/112/24-25 ರಲ್ಲಿ ದಿನಾಂಕ: 22-07-2024 ರಂದು ಹೊರಡಿಸಿರುವ ಮಾರ್ಗಸೂಚಿಗಳು
4) ದಿ:26-07-2024 ರಂದು ಸ್ಥಳ ಆಯ್ಕೆ ಸಂಬಂಧ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆ.

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದನುಸಾರ ಉಲ್ಲೇಖ-(2)ರ ಸುತ್ತೋಲೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಫ್-'ಸಿ' ವೃಂದದ ಸಹ ಶಿಕ್ಷಕರು (ಪ್ರೌಢಶಾಲೆ) ವೃಂದದ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಉಲ್ಲೇಖ-(4)ರಂತೆ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಈ ಕೆಳಕಂಡ ಸಹ ಶಿಕ್ಷಕರು (ಪ್ರೌಢಶಾಲೆ) ರವರು ಒಂದೇ ವಲಯದ ಶಾಲೆಯನ್ನು ಆಯ್ಕೆ ಮಾಡಿಕೊಂಡಿರುವುದರಿಂದ ಸದರಿಯವರನ್ನು ಅವರ ಹೆಸರಿನ ಮುಂದೆ ನಮೂದಿಸಿರುವ ಮತ್ತೊಂದು ವಲಯದ ಸ್ಥಳದಲ್ಲಿ ಕಾರ್ಯನಿರ್ವಹಿಸಲು ವರ್ಗಾಯಿಸಿ ಆದೇಶಿಸಿದೆ.

| ಕ್ರ. ಸಂ | ಹೆಸರು | ಕಾರ್ಯನಿರ್ವಹಿಸುತ್ತಿರುವ ಕಛೇರಿ | ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿಕೊಂಡಿರುವಂತೆ ವರ್ಗಾಯಿಸಿ ನೇಮಿಸಿರುವ ಸ್ಥಳ |
|---|---|---|---|
| 1 | ಶ್ರೀ ರಮೇಶ್ ಶಿವಪ್ಪ ಕುಮರೇಶ್ | ಬಿಬಿಎಂಪಿ ಗಂಗಾನಗರ – ಪೂರ್ವ | ಬಿಬಿಎಂಪಿ ಕೋಂದಡರಾಮಪುರ -ಪಶ್ಚಿಮ |

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು / ಇಲಾಖಾ ಮುಖ್ಯಸ್ಥರುಗಳು ವರ್ಗಾವಣೆಗೊಂಡ ನೌಕರುಗಳು ವರ್ಗಾಯಿಸಲಾಗಿರುವ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ಅನುವಾಗುವಂತೆ ಅಗತ್ಯಕ್ರಮ ಕೈಗೊಳ್ಳುವುದು.

ಮೇಲ್ಕಂಡ ಆದೇಶವು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

**ಷರತ್ತುಗಳು:-**

1. ಸಾಮಾನ್ಯ ವರ್ಗಾವಣೆಗೊಂಡಿರುವ ಸಿಬ್ಬಂಧಿಗಳು ಬೇರೆ ಸ್ಥಳಕ್ಕೆ ವರ್ಗಾವಣೆ ಕೋರುವಂತಿಲ್ಲ ಹಾಗೂ ಈ ಆದೇಶವನ್ನು ಪಾಲಿಸದ ಸಂಬಂಧಪಟ್ಟ ಸಹ ಶಿಕ್ಷಕರು (ಪ್ರೌಢಶಾಲೆ) ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.
2. ಸದರಿ ವರ್ಗಾವಣೆ ಆದೇಶದಲ್ಲಿ ವರ್ಗಾವಣೆಗೊಂಡಿರುವ ಸಹ ಶಿಕ್ಷಕರು (ಪ್ರೌಢಶಾಲೆ) ರವರು ವರ್ಗಾವಣೆಗೊಂಡ ಸ್ಥಳಗಳಿಗೆ ವರದಿಮಾಡಿಕೊಳ್ಳುವ ಬಗ್ಗೆ ವಲಯ ಆಯುಕ್ತರು / ಜಂಟಿ ಆಯುಕ್ತರುಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದ ಮೇರೆಗೆ)

31.7.24

ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

30/7/2024 30/7/24 ಪು.ತಿ.ನೋ..

**ಪ್ರತಿಯನ್ನು:** ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ /ಜಂಟಿ ಆಯುಕ್ತರು ರವರುಗಳಿಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಶಿಕ್ಷಣ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ
: ಸಹಾಯಕ ಆಯುಕ್ತರು (ಶಿಕ್ಷಣ) ರವರಿಗೆ ಅಗತ್ಯ ಕ್ರಮಕ್ಕೆ ಕಳುಹಿಸಿದೆ.
: ಹಿರಿಯ ಸಹಾಯಕ ನಿರ್ದೇಶಕರು (ಶಿಕ್ಷಣ) ರವರಿಗೆ ಅಗತ್ಯ ಕ್ರಮಕ್ಕೆ ಕಳುಹಿಸಿದೆ.
: ಎಲ್ಲಾ ಇಲಾಖಾಮುಖ್ಯಸ್ಥರಿಗೆಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ನಿರ್ದೇಶಕರು (ಮಾಹಿತಿ ಮತ್ತು ತಂತ್ರಜ್ಞಾನ) ಹಾಗೂ ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಸದರಿ ಅಧಿಕಾರಿ / ಕಛೇರಿ ಪ್ರತಿ.